# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:06ನೇ ಮಾರ್ಚ್, 2025**

**(ಸಮಯ: ಬೆಳಗ್ಗೆ 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

| | |
|---|---|
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಹೆಚ್.ಎಸ್.ಗೋಪಿನಾಥ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 11(98) | ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ

"2025ನೇ ಮಾರ್ಚ್, 03ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:04.03.2025ರಂದು **ಶ್ರೀ ಐವನ್ ಡಿ'ಸೋಜಾ** ರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

**ಮೂರನೇ ದಿನ**

## 04. ಹದಿಹರೆಯದ ಮಕ್ಕಳು ಎದುರಿಸುತ್ತಿರುವ ಕೆಳಕಂಡ ಸಾಮಾನ್ಯ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳ ಬಗ್ಗೆ ವಿಶೇಷ ಚರ್ಚೆ.

1. ಸ್ವಾಭಿಮಾನ ಮತ್ತು ದೇಹದ ಚಿತ್ರಣ
2. ಒತ್ತಡ
3. ಬೆದರಿಸುವಿಕೆ
4. ಖಿನ್ನತೆ
5. ಸೈಬರ್ ವ್ಯಸನ
6. ಮದ್ಯಪಾನ ಮತ್ತು ಧೂಮಪಾನ
7. ಹದಿಹರೆಯದ ವಯಸ್ಸಿನಲ್ಲಿ ಗರ್ಭಧಾರಣೆ
8. ಅಪ್ರಾಪ್ತ ವಯಸ್ಕರ ಲೈಂಗಿಕತೆ
9. ಪ್ರತಿಭಟನೆಯ ನಡವಳಿಕೆಗಳು
10. ಸಮಾನಸ್ಕರ ಒತ್ತಡ ಮತ್ತು ಸ್ಪರ್ಧೆ

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮಂಜುನಾಥ ಭಂಡಾರಿ** ಅವರು ಉಡುಪಿ ಜಿಲ್ಲೆ, ಬ್ರಹ್ಮಾವರ ತಾಲ್ಲೂಕಿನ ದಕ್ಷಿಣ ಕನ್ನಡ ಜಿಲ್ಲಾ ಸಹಕಾರ ಸಕ್ಕರೆ ಕಾರ್ಖಾನೆಯ ಗುಜರಿ ಮಾರಾಟದಲ್ಲಿ 14 ಕೋಟಿ ರೂಪಾಯಿಗಳಿಗೂ ಅಧಿಕ ಮೊತ್ತದ ಬಹುಕೋಟಿ ಹಗರಣ ಹಾಗೂ ಈ ಬಗ್ಗೆ ತನಿಖೆಯ ವಿಳಂಬ ಧೋರಣೆ ಕುರಿತಂತೆ ಅಹೋರಾತ್ರಿ ಧರಣಿ ನಡೆಸುತ್ತಿದ್ದಾರೆ ಎನ್ನುವ ವಿಷಯದ ಕುರಿತು ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

02. **ಶ್ರೀ ಐವನ್ ಡಿ'ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ವೆನ್‌ಲಾಕ್ ಆಸ್ಪತ್ರೆ ಮತ್ತು ಲೇಡಿಗೋಶನ್ ಆಸ್ಪತ್ರೆಗಳನ್ನು ವಿಭಾಗೀಯ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಿ, ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ, ಸುಮಾರು 8 ಜಿಲ್ಲೆಗಳಿಗೆ ಕೇಂದ್ರವನ್ನಾಗಿ ಮಾರ್ಪಡಿಸಬೇಕೆನ್ನುವ ಸಾರ್ವಜನಿಕ ಮಹತ್ವದ ವಿಚಾರವನ್ನು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

03. **ಡಾ: ಧನಂಜಯ ಸರ್ಜಿ** ಅವರು ಶೈಕ್ಷಣಿಕ ವರದಿಗಳ ಪ್ರಕಾರ ಕಲಿಕೆಯಲ್ಲಿ ಹಿಂದುಳಿಯುತ್ತಿರುವ ಮಕ್ಕಳ ಸಂಖ್ಯೆ ಹೆಚ್ಚುತ್ತಿರುವುದನ್ನು ತಡೆಗಟ್ಟಲು ಸರ್ಕಾರದ ನೀತಿ ಹಾಗೂ ತೆಗೆದುಕೊಳ್ಳಬೇಕಾಗಿರುವ ಕ್ರಮಗಳ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್ ಹಾಗೂ ಮಾನ್ಯ ಶಾಸಕರುಗಳಾದ ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ಎಸ್.ಎಲ್. ಭೋಜೇಗೌಡ, ಶ್ರೀ ಸಿ.ಟಿ. ರವಿ, ಶ್ರೀ ಶಶೀಲ್ ಜಿ. ನಮೋಶಿ ಹಾಗೂ ಇತರರು** ಕರ್ನಾಟಕ ಲೋಕಸೇವಾ ಆಯೋಗ ನಡೆಸುತ್ತಿರುವ ಕೆ.ಎ.ಎಸ್. ಪರೀಕ್ಷೆಯಲ್ಲಿ ಆಗುತ್ತಿರುವ ತಪ್ಪುಗಳಿಂದಾಗಿ ಅಭ್ಯರ್ಥಿಗಳು ಅತಂಕಕ್ಕೀಡಾಗಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ತಿಪ್ಪಣ್ಣಪ್ಪ ಕಮಕನೂರ, ಡಾ: ತಳವಾರ್ ಸಾಬಣ್ಣ, ಬಸನಗೌಡ ಬಾದರ್ಲಿ, ಹೆಚ್.ಪಿ. ಸುಧಾಮ್ ದಾಸ್, ಎ. ವಸಂತ್ ಕುಮಾರ್ ಹಾಗೂ ಎಂ.ಎಲ್. ಅನಿಲ್ ಕುಮಾರ್** ಅವರುಗಳು ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ವಿಧಾನಸೌಧದ ಮುಂದೆ ಸ್ಥಾಪಿಸುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಎನ್.ಹೆಚ್.ಎಮ್. ಯೋಜನೆಯಡಿ ಕಳೆದ 19 ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಲ್ಯಾಬ್ ಟೆಕ್ನಿಷಿಯನ್, ಸ್ಟಾಫ್ ನರ್ಸ್ ಹಾಗೂ ಆಯುಷ್ ವೈದ್ಯರುಗಳನ್ನು ಖಾಯಂಗೊಳಿಸುವ ಕುರಿತು ಪ್ರಸ್ತಾಪಿಸುವುದು.

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅಡಿಕೆ ಬೆಳೆಗೆ ತಗುಲಿರುವ ಎಲೆಚುಕ್ಕಿ ಹಾಗೂ ಹಳದಿ ರೋಗವನ್ನು ತಡೆಗಟ್ಟುವ ಬಗ್ಗೆ ದಿನಾಂಕ:04.03.2025ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:04(32)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**